ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್ ಎಸ್ ಎಸ್/01/ಐಡಿಪಿ/2019-20

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ: 19-11-2020

## ಸುತ್ತೋಲೆ

ವಿಷಯ:ದಿನಾಂಕ: 19-11-2020 ರಿಂದ 25-11-2020 ರ ವರೆಗೆ ರಾಷ್ಟ್ರೀಯ ಐಕ್ಯತಾ ಸಪ್ತಾಹ ವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿಯವರ ಪತ್ರ ಸಂಖ್ಯೆ: ಸಿಆಸುಇ 125 ರಾಸ 2020 ದಿನಾಂಕ: 04-11-2020

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷದಂತೆ ಈ ವರ್ಷವೂ ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹೆಚ್ಚುತ್ತಿರುವ ಹಿಂಸಚಾರ ಮತ್ತು ಕೋಮು ದ್ವೇಶವನ್ನು ತಡೆಗಟ್ಟುವುದಕ್ಕಾಗಿ **''ರಾಷ್ಟ್ರೀಯ ಐಕ್ಯತಾ ಸಪ್ತಾಹ''** ವನ್ನು ರಾಜ್ಯ ಸರ್ಕಾರದ ಆದೇಶದಂತೆ ದಿನಾಂಕ: 19-11-2020 ರಿಂದ 25-11-2020 ರ ವರೆಗೆ ರಾಷ್ಟ್ರೀಯ ಐಕ್ಯತಾ ಪ್ರಮಾಣ (ಲಗತ್ತಿಸಿದೆ) ಸ್ವೀಕರಿಸುವುದರೊಂದಿಗೆ ವಾರವಿಡಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು (ಲಗತ್ತಿಸಿದೆ) ಅರ್ಥಪೂರ್ಣವಾಗಿ ಆಚರಿಸಲು ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿಯಲ್ಲಿರುವ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ. ಸದರಿ ಕಾರ್ಯಕ್ರಮ ನಡೆಸುವಾಗ ರಾಷ್ಟ್ರೀಯ ಭಾವೈಕ್ಯತಾ ಚಿಹ್ನೆಯನ್ನು ವೇದಿಕೆಯ ಮೇಲೆ ಪ್ರಮುಖವಾಗಿ ಪ್ರದರ್ಶನ ಮಾಡುವುದು. ಕಾರ್ಯಕ್ರಮವನ್ನು ನಡೆಸಿದ ಬಗ್ಗೆ ಒಂದು ಕಿರು ವರದಿಯನ್ನು ಪತ್ರ ಮುಖೇನ ರಾಷ್ಟ್ರೀಯ ಸೇವಾ ಯೋಜನೆಯ ಕಛೇರಿಗೆ ಹಾಗೂ ಪ್ರತಿಯನ್ನು ಮಿಂಚಂಚೆ nssdte@gmail.com ಗೆ ಕಳುಹಿಸಲು ಪ್ರಾಚಾರ್ಯರಿಗೆ ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ:-ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಸೂಕ್ತ ಕ್ರಮಕ್ಕಾಗಿ,

ಪ್ರತಿ: 1) ಸರ್ಕಾರದ ಅಧೀನ ಕಾರ್ಯದರ್ಶಿಯವರು (ಪ್ರ) ಸಿಆಸುಇ (ರಾಜಕೀಯ) ವಿಧಾನಸೌಧ, ಬೆಂಗಳೂರು-01
2) ಇ -ಆಡಳಿತ ವಿಭಾಗಕ್ಕೆ ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಕಛೇರಿ ಕಡತಕ್ಕೆ

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 125 ರಾಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 04.11.2020.

NCC/EST-09
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ
ಆಪ್ತ ಶಾಖೆ.
ಸಂಖ್ಯೆ 938
ದಿನಾಂಕ 04/11/2020

## ಸುತ್ತೋಲೆ

**ವಿಷಯ: ದಿನಾಂಕ: 19.11.2020 ರಿಂದ 25.11.2020ರ ವರೆಗೆ ರಾಜ್ಯಾದ್ಯಂತ "ರಾಷ್ಟ್ರೀಯ ಐಕ್ಯತಾ ಸಪ್ತಾಹ"ವನ್ನು ಆಚರಿಸುವ ಬಗ್ಗೆ.**

*****

ಪ್ರತಿ ವರ್ಷದಂತೆ ಕೇಂದ್ರ ಸರಕಾರದ ಸೂಚನೆಯನ್ವಯ, ರಾಜ್ಯದಾದ್ಯಂತ ದಿನಾಂಕ: 19.11.2020 ರಿಂದ 25.11.2020 ರವರೆಗೆ "ರಾಷ್ಟ್ರೀಯ ಐಕ್ಯತಾ ಸಪ್ತಾಹ" ವನ್ನು ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಅದರಂತೆ, ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಕೋರಲಾಗಿದೆ. ಈ ಸಪ್ತಾಹದ ಅಂಗವಾಗಿ ವಾರವಿಡೀ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ವಿವರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ. ಕಳೆದ ವರ್ಷಗಳಂತೆ, ಕಾರ್ಯಕ್ರಮಗಳನ್ನು ನಡೆಸುವಾಗ, ರಾಷ್ಟ್ರೀಯ ಭಾವೈಕ್ಯತಾ ಚಿಹ್ನೆಯನ್ನು ವೇದಿಕೆಯ ಮೇಲೆ ಪ್ರಮುಖವಾಗಿ ಪ್ರದರ್ಶನ ಮಾಡುವಂತೆ ಕ್ರಮ ತೆಗೆದುಕೊಳ್ಳಬೇಕು.

ದಿನಾಂಕ:19.11.2020ರ ಗುರುವಾರದಂದು, ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಎಲ್ಲಾ ಸರ್ಕಾರದ ಕಛೇರಿಗಳಲ್ಲಿ ಸ್ವೀಕರಿಸಬೇಕಾಗಿ ಸೂಚಿಸಲಾಗಿದೆ. ಪ್ರಮಾಣ ವಚನದ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ.

V. Akkamahadevi 04/11/2020

**(ಎ.ಅಕ್ಕಮಹಾದೇವಿ)**
ಸರಕಾರದ ಅಧೀನ ಕಾರ್ಯದರ್ಶಿ (ಪ್ರ)
ಸಿಆಸುಇ (ರಾಜಕೀಯ)

ಇವರಿಗೆ

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
2. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು,
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ/ ವಿಧಾನ ಪರಿಷತ್, ವಿಧಾನಸೌಧ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು/ಪೋಲೀಸ್ ಅಧೀಕ್ಷಕರುಗಳು,
4. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು.
5. ಎಲ್ಲಾ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

"ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

"ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."

**ದಿನಾಂಕ 19.11.2020 ರಿಂದ 25.11.2020 ರವರೆಗೆ**
**ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರ**

ದಿನಾಂಕ 19.11.2020 ಗುರುವಾರ

"ರಾಷ್ಟ್ರೀಯ ಐಕ್ಯತಾ ದಿನ"

ಅಹಿಂಸೆ, ಕೋಮು ಸೌಹಾರ್ದತೆ, ಜಾತ್ಯಾತೀತತೆ, ಈ ವಿಷಯಗಳ ಬಗ್ಗೆ ಸಭೆಗಳನ್ನು ಹಾಗೂ ವಿಚಾರ ಸಂಕಿರಣಗಳನ್ನು ಏರ್ಪಡಿಸುವುದು.

ದಿನಾಂಕ 20.11.2020 ಶುಕ್ರವಾರ

"ಅಲ್ಪ ಸಂಖ್ಯಾತರ ಕಲ್ಯಾಣ ದಿನ"

ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ರೂಪಿಸಿರುವ 15 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಪ್ರಯತ್ನಿಸುವುದು ಮತ್ತು ಕೋಮು ಗಲಭೆ ಪೀಡಿತ ಪ್ರದೇಶಗಳಲ್ಲಿ ಭ್ರಾತೃತ್ವ ಭಾವನೆ ಬೆಳೆಸುವಂತೆ ಮೆರವಣಿಗೆಗಳನ್ನು ಏರ್ಪಡಿಸುವುದು.

ದಿನಾಂಕ 21.11.2020 ಶನಿವಾರ

"ಭಾಷಾ ಸೌಹಾರ್ದತಾ ದಿನ"

ಭಾರತದ ಇತರ ಪ್ರದೇಶಗಳ ಭಾಷಾ ಪರಂಪರೆಯನ್ನು ಮತ್ತೊಂದು ಪ್ರದೇಶದ ಜನತೆಗೆ ತಿಳಿ ಹೇಳುವ ಸಲುವಾಗಿ ವಿಶೇಷ ಸಾಹಿತ್ಯಕ ಸಮಾರಂಭ ಮತ್ತು ಕವಿ ಸಮ್ಮೇಳನಗಳನ್ನು ಏರ್ಪಡಿಸುವುದು.

ದಿನಾಂಕ 22.11.2020 ಭಾನುವಾರ

"ದುರ್ಬಲ ವರ್ಗಗಳ ದಿನ"

ಭೂಹೀನ ಕೃಷಿ ಕಾರ್ಮಿಕರಿಗೆ ಹೆಚ್ಚುವರಿ ಜಮೀನು ಮಂಜೂರಾತಿ ಕಾರ್ಯಕ್ರಮ ಸೇರಿದಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ದುರ್ಬಲ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳನ್ನು ಎತ್ತಿ ತೋರಿಸುವಂತೆ ಸಭೆ ಮತ್ತು ಮೆರವಣಿಗೆಗಳನ್ನು ಏರ್ಪಡಿಸುವುದು.

ದಿನಾಂಕ 23.11.2020 ಸೋಮವಾರ

"ಸಾಂಸ್ಕೃತಿಕ ಏಕತಾ ದಿನ"

ಭಾರತೀಯ ಪರಂಪರೆಯಾದ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಬಿಂಬಿಸುವಂತಹ ಸಂಸ್ಕೃತಿ ಮತ್ತು ಐಕ್ಯತೆಯನ್ನು ಸಂರಕ್ಷಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ದಿನಾಂಕ 24.11.2020 ಮಂಗಳವಾರ

"ಮಹಿಳಾ ದಿನ"

ಭಾರತೀಯ ಸಮಾಜದಲ್ಲಿ ಮಹಿಳೆಯರ ಪ್ರಾಮುಖ್ಯತೆ ರಾಷ್ಟ್ರ ನಿರ್ಮಾಣ ಹಾಗೂ ಪ್ರಗತಿಯಲ್ಲಿ ಅವರ ಪಾತ್ರವನ್ನು ಎತ್ತಿ ತೋರಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ದಿನಾಂಕ 25.11.2020 ಬುಧವಾರ

"ಪರಿಸರ ರಕ್ಷಣಾ ದಿನ"

ಜನ ಸಾಮಾನ್ಯರಿಗೆ ಪರಿಸರದ ಬಗ್ಗೆ ಹಾಗೂ ಅದನ್ನು ಉಳಿಸಿ ಬೆಳೆಸಲು ತಿಳುವಳಿಕೆ ಹೇಳುವ ಸಭೆ ಸಮಾರಂಭಗಳನ್ನು ಏರ್ಪಡಿಸುವುದು.